JUNE 15, 2025

# AKASHAVANI - DHARWAD
# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಸಕಾಲಿಕ ಚಿಕಿತ್ಸೆ, ಶೈಕ್ಷಣಿಕ ಚಟುವಟಿಕೆಗಳು ನಿರಂತರವಾಗಿ ಸಾಗಲು, ಮಗು ಮತ್ತು ಪಾಲಕರಿಗೆ ನೆರವಾಗಲು, ಸರ್ಕಾರದ ವತಿಯಿಂದ, ಉಚಿತವಾಗಿ ಶಾಲಾ ವ್ಯವಸ್ಥೆ ಕಲ್ಪಿಸಲು, ಯೋಜಿಸಲಾಗಿದೆ ಎಂದು, ಶಿಕ್ಷಣ ಹಾಗೂ ಸಾಕ್ಷರತಾ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದರು. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಪ್ರಾಥಮಿಕ ಮಾಹಿತಿ ಪ್ರಕಾರ, ರಾಜ್ಯದಲ್ಲಿ ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿರುವ, 3 ಸಾವಿರದ 500 ಮಕ್ಕಳು ಇದ್ದಾರೆ, ಆ ಪೈಕಿ ಸಾವಿರದ ಐನೂರು ಮಕ್ಕಳು ಶಾಲೆಗೆ ದಾಖಲಾಗಬಹುದು ಎಂದು ಅಂದಾಜಿಸಲಾಗಿದೆ. ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಚಿಕಿತ್ಸಾ ಆಸ್ಪತ್ರೆಗೆ ಹೊಂದಿ, ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ, ಕ್ಯಾನ್ಸರ್ ಪೀಡಿತ ಮಕ್ಕಳಿಗಾಗಿ, ವಸತಿ ಶಾಲೆ ಆರಂಭಿಸಲಾಗುತ್ತಿದೆ ಎಂದರು.

<><><>

ವಿಜಯಪುರ ನಗರದ, ನಿಖಿಲ್ ಸೊನ್ನದ್ ಅವರು ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ –ನೀಟ್ ನಲ್ಲಿ, ರಾಷ್ಟ್ರ ಮಟ್ಟದಲ್ಲಿ 17 ನೇ ರ್‍ಯಾಂಕ್ ಹಾಗೂ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಎಕ್ಸ್‌ಪರ್ಟ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ನಿಖಿಲ್ ಸೊನ್ನದ ಅವರು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಧ್ವನಿ: ನಿಖಿಲ್ ಸೊನ್ನದ 35 ಸೆಕೆಂಡುಗಳು

<><><>

ಇಂದು, ನವೀಕರಿಸಬಹುದಾದ ಇಂಧನ ಮೂಲ, ಜಾಗತಿಕ 'ಪವನ ವಿದ್ಯುತ್', ಶಕ್ತಿ ದಿನ. ತಮ್ಮ ಎಕ್ಸ್ ಖಾತೆ ಮೂಲಕ ದಿನದ ವಿಶೇಷತೆ ಬಗ್ಗೆ, ಮಾಹಿತಿ ಹಂಚಿಕೊಂಡಿರುವ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು, ಭಾರತದಲ್ಲಿ, 51 ದಶಾಂಶ 5 ಗಿಗಾ ವ್ಯಾಟ್ ಪವನ ವಿದ್ಯುತ್ ಸಾಮರ್ಥ್ಯ ಏರಿಕೆಯಾಗಿದೆ. ನಾವೀನ್ಯತೆ, ಹಸಿರು ಇಂಧನ ತಂತ್ರಜ್ಞಾನ ಹಾಗೂ ಸುಸ್ಥಿರ ಪ್ರಗತಿ ಮೂಲಕ ಆತ್ಮ ನಿರ್ಭರ ಭಾರತದ ಕಡೆಗೆ ದೇಶ ಸಾಗುತ್ತಿದೆ ಎಂದಿದ್ದಾರೆ.

<><><>

ಆಧುನಿಕ ಜೀವನಶೈಲಿಯಿಂದ ಆಗುತ್ತಿರುವ ಮಾನಸಿಕ ಒತ್ತಡ, ಆತಂಕ ನಿವಾರಣೆಗೆ ಯೋಗವು ಸಹಕಾರಿ ಎಂದು ಬ್ರಹ್ಮ ಕುಮಾರಿ ರಾಜಯೋಗಿನಿ ಬಿ.ಕೆ ಅಂಬಿಕಾ ಹೇಳಿದರು. ಬೆಂಗಳೂರಿನಲ್ಲಿ ಕೇಂದ್ರ ಸಂವಹನ ಕಚೇರಿ, ಕರ್ನಾಟಕ ಹಾಗೂ ಬ್ರಹ್ಮ ಕುಮಾರಿ ಸಂಸ್ಥೆ ವತಿಯಿಂದ ಆಯೋಜಿತ, ಯೋಗ ದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಿಯಮಿತ ಯೋಗಾಭ್ಯಾಸದಿಂದ ಮಾನಸಿಕ ಹಾಗೂ ಶಾರೀರಿಕ ಶಕ್ತಿ ವರ್ಧನೆಯಾಗಿ, ಋಣಾತ್ಮಕ ಭಾವನೆಗಳಿಂದ ಮುಕ್ತಿ ಪಡೆಯಬಹುದಾಗಿದೆ ಎಂದರು.

<><><>

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿಯಾಗಿ, ಇಂದು ಧಾರವಾಡ, ಎಪಿಎಂಸಿ ಆವರಣದ ಪತಂಜಲಿ ಯೋಗ ಕೇಂದ್ರದಲ್ಲಿ ಸಾರ್ವಜನಿಕರಿಗಾಗಿ, ವಿಶೇಷ ಯೋಗ ಧ್ಯಾನ ಹಾಗೂ ಪ್ರಾಣಾಯಾಮ ಶಿಬಿರ ಜರುಗಿತು.

<><><>

ವಿದ್ಯಾರ್ಥಿಗಳು ತಮ್ಮ ಜೀವನ, ಸುಂದರವಾಗಿಸಲು, ನಿರ್ದಿ ್ಟ ಗುರಿಯನ್ನು ಹೊಂದಿರಬೇಕು ಎಂದು ಕರ್ನಾಟಕ ವಿಶ್ವವಿದ್ಯಾಲಯದ, ಸಮಾಜ ವಿಜ್ಞಾನ ನಿಕಾಯದ ಡೀನ ಪ್ರೊಫೆಸರ ಶೌಕತ್ ಅಜೀಮ್ ಹೇಳಿದರು. ಧಾರವಾಡ, ಕರ್ನಾಟಕ ವಿಶ್ವವಿದ್ಯಾಲಯದ ಕನಕ ಅಧ್ಯಯನ ಪೀಠದಲ್ಲಿ ಜರುಗಿದ 'ಕನಕದಾಸ ಮತ್ತು ವ್ಯಕ್ತಿತ್ವ ಬೆಳವಣಿಗೆ' ವಿ ’ಯದ ಕುರಿತು ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಉತ್ತಮ ಆಲೋಚನೆ ಹಾಗೂ ಹವ್ಯಾಸಗಳಿಂದ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದರು.

<><><>

ಕಲ್ಯಾಣ ಕರ್ನಾಟಕ ಭಾಗದ, ಏಳು ಜಿಲ್ಲೆಗಳ ಅಭಿವೃದ್ಧಿಗೆ, ಕಳೆದ ಮೂರು ವ ’ಗಳಲ್ಲಿ 13 ಸಾವಿರ ಕೋಟಿ ರೂಪಾಯಿ ಅನುದಾನ, ರಾಜ್ಯ ಸರ್ಕಾರ ಒದಗಿಸಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಆಯೋಜಿಸಿರುವ "ಆರೋಗ್ಯ ಆವಿ ್ಕರ" ಯೋಜನೆ ಅಡಿ, 440 ಕೋಟಿ 63 ಲಕ್ಷ ರೂಪಾಯಿ ಮೊತ್ತದ ಕಾಮಗಾರಿಗಳನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕದ, 42 ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು ಎಂದರು.

<><><>

ರಾಯಚೂರು ಜಿಲ್ಲೆ, ಡಿ.ರಾಂಪುರ ಗ್ರಾಮದಲ್ಲಿ, ಕೃಷಿ ವಿಜ್ಞಾನ ಕೇಂದ್ರದ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ, ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನದ ಸಮಾರೋಪ ಸಮರಂಭ ಜರುಗಿತು.

<><><>

ಉತ್ತರಕನ್ನಡ ಜಿಲ್ಲೆ, ಕುಮಟಾ ತಾಲೂಕಿನಾದ್ಯಂತ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ, ದೇವಿ ಮನೆ ಘಟ್ಟದಲ್ಲಿ ಗುಡ್ಡ ಕುಸಿತ ಸಂಭವಿಸಿದೆ. ಕುಮಟಾ – ಶಿರಸಿ ಹೆದ್ದಾರಿಯಲ್ಲಿ ವಾಹನ ಸಂಚಾರ ಬಂದ್ ಮಾಡಲಾಗಿದೆ. ಹೆದ್ದಾರಿಯಲ್ಲಿ ಮಣ್ಣು ಹಾಗೂ ಕಲ್ಲಿನ ತೆರವು ಕಾರ್ಯಾಚರಣೆ ನಡೆಯುತ್ತಿದೆ.

<><><>

ಎರಡೂವರೆ ಸಾವಿರ ಕೋಟಿ ರೂಪಾಯಿ, ಬೆಳೆ ನಷ್ಟ ಪರಿಹಾರ, ಕಳೆದ ಬರಗಾಲದಲ್ಲಿ, ರೈತರಿಗೆ ಪಾವತಿಸಲಾಗಿದೆ ಎಂದು, ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>